## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 930 |
| ಸದಸ್ಯರ ಹೆಸರು | : | ಶ್ರೀ ಬಿ.ಎಂ. ಫಾರೂಕ್ |
| ಉತ್ತರಿಸಬೇಕಾದ ದಿನಾಂಕ | : | 13.12.2023 (ವರ್ಗಾವಣೆಗೊಂಡ ಪ್ರಶ್ನೆ) |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಪ್ರಶ್ನೆ | | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರಿನ ಪ್ರಸಿದ್ಧ ಪ್ರವಾಸಿ ತಾಣಗಳಾದ ತಣ್ಣೀರುಬಾವಿ ಮತ್ತು ಸುಲ್ತಾನ ಬತ್ತೇರಿ ನಡುವಿನ ರಸ್ತೆ ತೀರಾ ಅಗಲ ಕಿರಿದಾಗಿದ್ದು, ತಕ್ಷಣ ಅಭಿವೃದ್ಧಿ ಪಡಿಸಬೇಕಾದ ಅಗತ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೊಳಪಡುವ ತಣ್ಣೀರುಬಾವಿ ಮತ್ತು ಸುಲ್ತಾನ ಬತ್ತೇರಿ ನಡುವಿನ ರಸ್ತೆಯನ್ನು ಅಭಿವೃದ್ಧಿಪಡಿಸುವ ಕಾಮಗಾರಿ ಕೈಗೊಳ್ಳಲು ಲೋಕೋಪಯೋಗಿ ಇಲಾಖೆಗೆ ಪ್ರವಾಸೋದ್ಯಮ ಇಲಾಖೆಯಿಂದ ರೂ.125.00ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಕಾಮಗಾರಿಯು ಪೂರ್ಣಗೊಂಡಿರುತ್ತದೆ. |
| ಆ) | ಬಂದಿದ್ದಲ್ಲಿ, ಈಗಿರುವ ರಸ್ತೆಯನ್ನು ಅಭಿವೃದ್ಧಿ ಅಗಲೀಕರಣ ಮಾಡಲು ಕೈಗೊಳ್ಳಲಾಗುವ ಕ್ರಮಗಳೇನು; (ವಿವರ ನೀಡುವುದು) | ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಸುಲ್ತಾನ್ ಬತ್ತೇರಿ ರಸ್ತೆಯ ಅಗಲೀಕರಣ ಹಾಗೂ ಪೂರಕ ಕಾಮಗಾರಿಗಳನ್ನು ರೂ.135.32 ಲಕ್ಷಗಳ ವೆಚ್ಚದಲ್ಲಿ ಟೆಂಡರ್ ಕರೆದು, ಈಗಾಗಲೇ ದಿನಾಂಕ 10.01.2022 ರಂದು ಗುತ್ತಿಗೆದಾರರಾದ ಶ್ರೀ ಅಬ್ದುಲ್ ರೆಹಮಾನ್ ಇವರಿಗೆ ಕಾರ್ಯಾದೇಶ ನೀಡಲಾಗಿದ್ದು, ಕಾಮಗಾರಿಯು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿದ್ದು, ಶೀಘ್ರದಲ್ಲಿ ಸಂಚಾರಕ್ಕೆ ಮುಕ್ತಗೊಳಿಸಲಾಗುತ್ತದೆ. |
| ಇ) | ಸದರಿ ರಸ್ತೆಯನ್ನು ಸಂಪರ್ಕಿಸುವ ಸೇತುವೆ ಕುಸಿದು ಬೀಳುವ ಹಂತದಲ್ಲಿದ್ದು, ರಸ್ತೆಯೊಂದಿಗೆ ಉತ್ತಮ ಸೇತುವೆ ಸೌಲಭ್ಯ ಕಲ್ಪಿಸಲು ಸರ್ಕಾರ ಮುಂದಾಗುವುದೇ; ಹಾಗಿದ್ದಲ್ಲಿ, ಈ ಬಗ್ಗೆ ತೆಗೆದುಕೊಳ್ಳಲಾಗುವ ಯೋಜನೆಗಳೇನು; ಯಾವ ಕಾಲಮಿತಿಯಲ್ಲಿ ಕಾರ್ಯಗತವಾಗುವುದು; | ಸದರಿ ಅಗಲೀಕರಣಗೊಂಡ ರಸ್ತೆಯಲ್ಲಿ ಕಿರುಸೇತುವೆ, ಚರಂಡಿ ಮತ್ತು ಫುಟ್ ಪಾತ್ ಅಭಿವೃದ್ಧಿ ಕಾಮಗಾರಿಯನ್ನು ರೂ.175.70ಲಕ್ಷಗಳ ವೆಚ್ಚದಲ್ಲಿ ಟೆಂಡರ್ ಕರೆದು, ಈಗಾಗಲೇ ಗುತ್ತಿಗೆದಾರರಾದ ಶ್ರೀ ಅಬ್ದುಲ್ ರೆಹಮಾನ್ ಇವರಿಗೆ ಕಾರ್ಯಾದೇಶ ನೀಡಲಾಗಿದ್ದು, ಕಾಮಗಾರಿಯು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿದ್ದು, ಶೀಘ್ರದಲ್ಲಿ ಸಂಚಾರಕ್ಕೆ ಮುಕ್ತಗೊಳಿಸಲಾಗುತ್ತದೆ. |
| ಈ) | ಸದರಿ ರಸ್ತೆಯ ಸಂಚಾರ ದಟ್ಟಣೆ ಸುಗಮಗೊಳಿಸುವ ಸಲುವಾಗಿ ಈಗಿನ ರಸ್ತೆಗೆ ಒಂದು ಸಮಾನಾಂತರ ಹೊಸ ಆಧುನಿಕ ರಸ್ತೆ ನಿರ್ಮಾಣಕ್ಕೆ ಸರ್ಕಾರ ಮುಂದಾಗಬಹುದೇ; ಈ ನಿಟ್ಟಿನಲ್ಲಿ ಸರ್ಕಾರದ ನಿಲುವುಗಳೇನು? (ವಿವರ ನೀಡುವುದು) | ಮುಂದುವರೆದು, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆ ಸುಗಮಗೊಳಿಸುವ ಸಲುವಾಗಿ ಮಹಾಯೋಜನೆ (ಪ-2) ರ ವ್ಯಾಪಕ ಅಭಿವೃದ್ಧಿ ಯೋಜನೆಯಲ್ಲಿ ಮಂಗಳಾ ಕಾರ್ನಿಷ್ 30 ಮೀ. ಅಗಲದ ರಸ್ತೆಯನ್ನು ಪ್ರಸ್ತಾಪಿಸಲಾಗಿದ್ದು, ಇದರ ಕಾರ್ಯ ಯೋಜನೆಯ ನಿರ್ಣಯವು ಪಾಲಿಕೆಯ ಹಂತದಲ್ಲಿ ಬಾಕಿ ಇರುತ್ತದೆ. |

**ನಅಇ 67 ಎಂಎಂಸಿ 2023 (ಇ)**

15/12/2023

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ
ಯೋಜನೆ ಸಚಿವರು